# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 91 |
| ಸದಸ್ಯರ ಹೆಸರು | ಶ್ರೀ ಎನ್.ರವಿಕುಮಾರ್ |
| ಉತ್ತರಿಸುವ ದಿನಾಂಕ | 13/02/2023 |
| ಉತ್ತರಿಸುವವರು | ಧಾರ್ಮಿಕ ದತ್ತಿ, ಹಜ್ ಹಾಗೂ ವಕ್ಫ್ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಶ್ರೀ ಧರ್ಮರಾಯಸ್ವಾಮಿ ದೇವಾಲಯಕ್ಕೆ ಸೇರಿದ ಬೆಂಗಳೂರು ನಗರ ಜಿಲ್ಲೆಯ ನೀಲಸಂದ್ರ ಗ್ರಾಮದ ಸರ್ವೆ ನಂ-79ರಲ್ಲಿನ 15 ಎಕರೆ 12 ಗುಂಟೆ ಜಮೀನಿನಲ್ಲಿ ಅನಧಿಕೃತವಾಗಿ ಅಕ್ರಮವಾಗಿ ಕಟ್ಟಡಗಳನ್ನು ನಿರ್ಮಿಸಿರುವ ಕುರಿತು ಸಹಾಯಕ ಆಯುಕ್ತರು ಮುಜರಾಯಿ ಇಲಾಖೆ ರವರು ದಿನಾಂಕ:30.11.2020 ರಂದು ಸರ್ಕಾರಕ್ಕೆ ಬರೆದಿರುವ ಪತ್ರಕ್ಕೆ ಯಾವ ಕ್ರಮ ಕೈಗೊಳ್ಳಲಾಗಿದೆ. | ಬೆಂಗಳೂರು ನಗರ ತಿಗಳರಪೇಟೆಯಲ್ಲಿರುವ ಶ್ರೀ ಧರ್ಮರಾಯಸ್ವಾಮಿ ದೇವಾಲಯಕ್ಕೆ ಸೇರಿದ ನೀಲಸಂದ್ರ ಗ್ರಾಮದಲ್ಲಿರುವ ಸರ್ವೆ ಸಂಖ್ಯೆ-79 ರಲ್ಲಿ 15 ಎಕರೆ 12 ಗುಂಟೆ ಜಮೀನಿನಲ್ಲಿ ಅನಧಿಕೃತವಾಗಿ ಅಕ್ರಮವಾಗಿ ಕಟ್ಟಡಗಳನ್ನು ನಿರ್ಮಿಸಿರುವ ಕುರಿತು ಸಹಾಯಕ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರು ದಿನಾಂಕ:30.11.2020ರಂದು ಅಥವಾ ಇತರೆ ಯಾವುದೇ ದಿನಾಂಕದಲ್ಲಿ ಸರ್ಕಾರಕ್ಕೆ ಪತ್ರ ಬರೆದಿರುವುದಿಲ್ಲ, ಸರ್ಕಾರಕ್ಕೆ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಬೆಂಗಳೂರು ಇವರ ಮೂಲಕ ಪ್ರಸ್ತಾವನೆಯನ್ನು ನಿಯಮಾನುಸಾರ ಸ್ವೀಕರಿಸಲಾಗುವುದು ಈ ಸಂಬಂಧದಲ್ಲಿ ಸರ್ಕಾರಕ್ಕೆ ಯಾವುದೇ ಪತ್ರ ಸ್ವೀಕೃತವಾಗಿರುವುದಿಲ್ಲ.<br><br>ದಿನಾಂಕ:30/11/2020 ರಂದು ಸಹಾಯಕ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರು ದಿನಾಂಕ:30.11.2020ರಲ್ಲಿ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ದಕ್ಷಿಣ-ಪೂರ್ವ-1, ಉಪ ವಿಭಾಗ ಬೆಂಗಳೂರು ಜಲ ಮಂಡಳಿ ಬೆಂಗಳೂರು, ಕಾರ್ಯನಿರ್ವಾಹಕ ಅಭಿಯಂತರರು, ಬೆಂಗಳೂರು ವಿದ್ಯುತ್ ಸರಬರಾಜು ಕಂಪನಿ ನಿಯಮಿತ, ಬೆಂಗಳೂರು ಇವರಿಗೆ ಮತ್ತು ಸಹಾಯಕ ಕಂದಾಯ ಅಧಿಕಾರಿ ಬಿ.ಬಿ.ಎಂ.ಪಿ ವಾರ್ಡ್ ಕಛೇರಿ ವಾರ್ಡ್ ಸಂಖ್ಯೆ 116, ಬೆಂಗಳೂರು ಇವರಿಗೆ ಪತ್ರ ಬರೆದಿರುತ್ತಾರೆ. |
| ಆ) | ಅನಧಿಕೃತವಾಗಿ ದೇವಾಲಯದ ಸ್ಥಳದಲ್ಲಿ ಅಕ್ರಮವಾಗಿ ನಿರ್ಮಿಸಿದ ಕಟ್ಟಡಗಳಲ್ಲಿ ವಾಸಿಸುತ್ತಿರುವವರನ್ನು ಖುಲ್ಲಾ ಮಾಡಿಸುವಂತೆ ಮುಜರಾಯಿ ಇಲಾಖೆಯಿಂದ ಪತ್ರ ಬರೆದ ಬಳಿಕವು ಯಾವುದೇ ಕ್ರಮ ಕೈಗೊಳ್ಳದ ಅಧಿಕಾರಿಗಳ ಮೇಲೆ ಸರ್ಕಾರ ಯಾವ ಕ್ರಮ ಕೈಗೊಳ್ಳಲಾಗಿದೆ: ಅಮಾನತ್ತು ಮಾಡಿ ಇಲಾಖಾ ಕ್ರಮ ಕೈಗೊಳ್ಳಲಾಗಿದೆಯೇ ಈ ಕುರಿತು ಸರ್ಕಾರದ ನಿಲುವೇನು? | ಸದರಿ ಪ್ರಕರಣದಲ್ಲಿ ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರಿಂದ ಶಿಸ್ತು ಕ್ರಮಕ್ಕೆ ಸಂಬಂಧಿಸಿದಂತೆ ಯಾವುದೇ ಪ್ರಸ್ತಾವನೆಯು ಸ್ವೀಕೃತವಾಗಿರುವುದಿಲ್ಲ.<br><br>ಈ ಬಗ್ಗೆ, ಆಯುಕ್ತರು, ಧಾರ್ಮಿಕ ದತ್ತಿ ಇಲಾಖೆ ಇವರ ಹಂತದಲ್ಲಿ ಅನಧಿಕೃತವಾಗಿ ದೇವಾಲಯದ ಸ್ಥಳದಲ್ಲಿ ಅಕ್ರಮವಾಗಿ ನಿರ್ಮಿಸಿದ ಕಟ್ಟಡಗಳಲ್ಲಿ ವಾಸಿಸುತ್ತಿರುವವರನ್ನು ಖುಲ್ಲಾ ಪಡಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದ್ದು, 2011-12ನೇ ಸಾಲಿನಿಂದ 2021-22ನೇ ಸಾಲಿನವರೆಗೆ ಕರ್ತವ್ಯ ನಿರ್ವಹಿಸಿರುವ ಅಧಿಕಾರಿ/ನೌಕರರ ವಿರುದ್ಧ ಮೇಲ್ನೋಟಕ್ಕೆ ಕರ್ತವ್ಯಲೋಪ ಎಸಗಿರುವುದು ಕಂಡುಬಂದ ಹಿನ್ನೆಲೆಯಲ್ಲಿ 06 ಅಧಿಕಾರಿ/ನೌಕರರ ವಿರುದ್ಧ ನಿಯಮಾನುಸಾರ ಶಿಸ್ತು ಕ್ರಮ ಕೈಗೊಳ್ಳಲು ಕಾರಣ ಕೇಳಿ ನೋಟೀಸನ್ನು ದಿನಾಂಕ:19-04-2022 ರಂದು ಜಾರಿಗೊಳಿಸಿ ಆರೋಪಿತರಿಂದ ಲಿಖಿತ ಹೇಳಿಕೆ ಮತ್ತು ದಾಖಲಾತಿಗಳನ್ನು ಪಡೆದಿದ್ದು, ಸದರಿ ಹೇಳಿಕೆ ಮತ್ತು ದಾಖಲಾತಿಗಳನ್ನು ಪರಿಶೀಲಿಸಿ ನಿಯಮಾನುಸಾರ ಕ್ರಮ ಜರುಗಿಸಲಾಗುತ್ತಿದೆ. |

ಸಂಖ್ಯೆ: ಕಂಇ 10 ಮುಸಪ್ರ 2023

**(ಶಶಿಕಲಾ. ಅ.ಜೊಲ್ಲೆ)**
ಧಾರ್ಮಿಕ ದತ್ತಿ, ಹಜ್ ಹಾಗೂ ವಕ್ಫ್ ಸಚಿವರು